# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಕೆ.ಗಂಗಮುತ್ತಯ್ಯ, ಸಹಾಯಕ ಕೃಷಿ ಅಧಿಕಾರಿ, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ (ನಿಯೋಜನೆ) ಬೆಂಗಳೂರು ಗ್ರಾಮಾಂತರ ಜಿಲ್ಲೆ ದೊಡ್ಡಬಳ್ಳಾಪುರ ತಾಲ್ಲೂಕು, ಮೇಳೆಕೋಟೆ ಗ್ರಾಮ ಪಂಚಾಯತಿ ಇವರ ಮೇಲಿನ ಟ್ರ್ಯಾಪ್ ಪ್ರಕರಣದ ಬಗ್ಗೆ ಲೋಕಾಯುಕ್ತರಿಗೆ ವಿಚಾರಣೆ ನಡೆಸಲು ಅನುಮತಿ ನೀಡುವ ಬಗ್ಗೆ.

**ಓದಲಾಗಿದೆ:-**

1. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರ ಪತ್ರ ಸಂ. COMPT/UPLOK/BD/2341/2012/ARLO-2, ದಿನಾಂಕ: 21-11-2012.
2. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪತ್ರ ಸಂಖ್ಯೆ: ಗ್ರಾ.ಅಪ/733/ಗ್ರಾಪಂಕಾ/2012. ದಿನಾಂಕ: 19-12-2012.
3. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರ ಪತ್ರ ಸಂ. COMPT/UPLOK/BD/2341/2012/ARLO-2, ದಿನಾಂಕ: 08-01-2013.

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಪತ್ರದಲ್ಲಿ ಶ್ರೀ ಕೆ. ಗಂಗಮುತ್ತಯ್ಯ, ಸಹಾಯಕ ಕೃಷಿ ಅಧಿಕಾರಿ, ಇವರು ಬೆಂಗಳೂರು ಗ್ರಾಮಾಂತರ ಜಿಲ್ಲೆ ದೊಡ್ಡಬಳ್ಳಾಪುರ ತಾಲ್ಲೂಕು, ಮೇಳೆಕೋಟೆ ಗ್ರಾಮ ಪಂಚಾಯತಿಯಲ್ಲಿ ನಿಯೋಜನೆಯ ಮೇಲೆ ಪಂಚಾಯತಿ ಅಭಿವೃದ್ಧಿ ಅಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿದ್ದಾಗ ಚನ್ನಾಪುರ ಗ್ರಾಮದಲ್ಲಿ ಹಾಲು ಉತ್ಪಾದಕರ ಸಹಕಾರ ಸಂಘದ ಕಟ್ಟಡ ನಿರ್ಮಾಣಕ್ಕೆ ಸಂಬಂಧಿಸಿದಂತೆ ಸದರಿ ಸಂಘದ ಅಧ್ಯಕ್ಷರಿಂದ ರೂ. 9,000/- ಲಂಚದ ಹಣಕ್ಕೆ ಒತ್ತಾಯಿಸಿ ದಿನಾಂಕ: 04-07-2011 ರಂದು ಹಣ ಸ್ವೀಕರಿಸುವಾಗ ಲೋಕಾಯುಕ್ತ ಪೋಲಿಸರ ಟ್ರ್ಯಾಪ್‌ಗೆ ಒಳಗಾದ ಕಾರಣ ಕರ್ನಾಟಕ ಲೋಕಾಯುಕ್ತ ಕಾಯಿದೆ, 1984 ಸೆಕ್ಷನ್12(3)ರ ಅನುಸಾರ ಕ್ರಮಕೈಗೊಳ್ಳಲು ಕರ್ನಾಟಕ ನಾಗರಿಕ ಸೇವಾ (ಸಿಸಿಎ) ನಿಯಮಾವಳಿಗಳು, 1957ರ ನಿಯಮ 14-ಎ ರನ್ವಯ ಅವರ ವಿರುದ್ದ ಇಲಾಖಾ ವಿಚಾರಣೆ ನಡೆಸಲು ಅನುಮತಿ ನೀಡುವಂತೆ ಮಾನ್ಯ ಉಪ ಲೋಕಾಯುಕ್ತರು ಗ್ರಾಮೀಣಾಭಿವೃದ್ದಿ ಮತ್ತು ಪಂಚಾಯತ್ ರಾಜ್ ಇಲಾಖೆಯನ್ನು ಕೋರಿರುತ್ತಾರೆ. ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಪತ್ರದಲ್ಲಿ ಶ್ರೀ ಗಂಗಮುತ್ತಯ್ಯ, ಸಹಾಯಕ ಕೃಷಿ ಅಧಿಕಾರಿ, ಇವರು ಕೃಷಿ ಇಲಾಖೆಯ ಅಧಿಕಾರಿಯಾಗಿರುವುದರಿಂದ ಇವರ ವಿರುದ್ದ ಇಲಾಖಾ ವಿಚಾರಣೆ ನಡೆಸಲು ಲೋಕಾಯುಕ್ತರಿಗೆ ಅನುಮತಿ ನೀಡುವ ಬಗ್ಗೆ ಮುಂದಿನ ಅಗತ್ಯ ಕ್ರಮ ಕೈಗೊಳ್ಳುವಂತೆ ಗ್ರಾಮೀಣಾಭಿವೃದ್ದಿ ಮತ್ತು ಪಂಚಾಯತ್ ರಾಜ್ಯ ಇಲಾಖೆಯವರು ಕೋರಿರುತ್ತಾರೆ.

ಮಾನ್ಯ ಲೋಕಾಯುಕ್ತರು ಕೋರಿರುವ ಪ್ರಕಾರ ಶ್ರೀ ಕೆ. ಗಂಗಮುತ್ತಯ್ಯ, ಸಹಾಯಕ ಕೃಷಿ ಅಧಿಕಾರಿ, ಹಿಂದಿನ ಪಂಚಾಯತಿ ಅಭಿವೃದ್ದಿ ಅಧಿಕಾರಿ(ನಿಯೋಜನೆ) ಬೆಂಗಳೂರು ಗ್ರಾಮಾಂತರ ಜಿಲ್ಲೆ ದೊಡ್ಡಬಳ್ಳಾಪುರ ತಾಲ್ಲೂಕು, ಮೇಳೆಕೋಟೆ ಗ್ರಾಮ ಪಂಚಾಯತಿ ಇವರು ಕರ್ನಾಟಕ

--2--

ನಾಗರೀಕ ಸೇವಾ (ನಡತೆ) ನಿಯಮಾವಳಿ 1966ರ ನಿಯಮ 3(1) ಪ್ರಕಾರ ತಪ್ಪೆಸಗಿದ್ದಾರೆಂದು ಮೇಲು ನೋಟಕ್ಕೆ (prima-facie) ಕಂಡು ಬಂದಿದ್ದರಿಂದ, ಅವರ ವಿರುದ್ಧ ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ಪ್ರಕಾರ ಶಿಸ್ತು ಕ್ರಮ ಕೈಗೊಳ್ಳಲು ಪ್ರಕರಣವನ್ನು ಇವರ ವಿರುದ್ಧ ಕರ್ನಾಟಕ ನಾಗರಿಕ ಸೇವಾ (ಸಿಸಿಎ) ನಿಯಮಾವಳಿಗಳು, 1957ರ ನಿಯಮ 14-ಎ ರನ್ವಯ ಇಲಾಖಾ ವಿಚಾರಣೆ ನಡೆಸಲು **ಮಾನ್ಯ ಉಪ** ಲೋಕಾಯುಕ್ತರವರಿಗೆ ವಹಿಸಲು ನಿರ್ಧರಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 01 ಕೃಪವಿ 2013.**

**ಬೆಂಗಳೂರು, ದಿನಾಂಕ: 02-02-2013.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಶ್ರೀ ಕೆ. ಗಂಗಮುತ್ತಯ್ಯ, ಸಹಾಯಕ ಕೃಷಿ ಅಧಿಕಾರಿ, ಇವರು ಬೆಂಗಳೂರು ಗ್ರಾಮಾಂತರ ಜಿಲ್ಲೆ ದೊಡ್ಡಬಳ್ಳಾಪುರ ತಾಲ್ಲೂಕು, ಮೇಳೆಕೋಟೆ ಗ್ರಾಮ ಪಂಚಾಯತಿಯಲ್ಲಿ ನಿಯೋಜನೆಯ ಮೇಲೆ ಪಂಚಾಯತಿ ಅಭಿವೃದ್ಧಿ ಅಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿದ್ದಾಗ, ಚನ್ನಾಪುರ ಗ್ರಾಮದಲ್ಲಿ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷರಿಂದ ಅಕ್ರಮ ಸಂಭಾವನೆ ಸ್ವೀಕರಿಸುವಾಗ ಲೋಕಾಯುಕ್ತ ಪೋಲಿಸರ ಟ್ರ್ಯಾಪ್‌ಗೆ ಒಳಗಾದ ಆರೋಪಕ್ಕೆ ಸಂಬಂಧಿಸಿದಂತೆ ಅವರ ವಿರುದ್ಧ ಕರ್ನಾಟಕ ನಾಗರಿಕ ಸೇವಾ (ಸಿ.ಸಿ.ಎ.) ನಿಯಮಾವಳಿ 1957ರಡಿ ಇಲಾಖಾ ವಿಚಾರಣಾ ಕ್ರಮವನ್ನು ಆಯೋಜಿಸಲು ಅದೇ ನಿಯಮಾವಳಿ ನಿಯಮ 14(ಎ)ರನ್ವಯ ಸದರಿ ಪ್ರಕರಣವನ್ನು ಕರ್ನಾಟಕ ಉಪ-ಲೋಕಾಯುಕ್ತರವರಿಗೆ ವಹಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

Manjunath 2/2/13

(ಮಂಜುನಾಥ ಪಾಟೀಲ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ.

ಇವರಿಗೆ:-

1. ಅಕೌಂಟ್ಸ್ ಆಫೀಸರ್, ಜಿಇ-5, ಮಹಾಲೇಖಪಾಲರ ಕಛೇರಿ, ಲೆಕ್ಕ ಪತ್ರ ಮತ್ತು ಲೆಕ್ಕ ತಪಾಸಣೆ) ಹೊಸಕಟ್ಟಡ, ಬೆಂಗಳೂರು-1.
2. ಮಾನ್ಯ ಉಪ ಲೋಕಾಯುಕ್ತರು-1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.

220



4. ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.
5. ಸಂಬಂಧಪಟ್ಟ ಅಧಿಕಾರಿಯವರಿಗೆ (ಕೃಷಿ ಆಯುಕ್ತರ ಮೂಲಕ)
6. ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕೃಷಿ ಇಲಾಖೆ, ಬೆಂಗಳೂರು.
8. ಸರ್ಕಾರದ ಉಪ ಕಾರ್ಯದರ್ಶಿ, ಕೃಷಿ ಇಲಾಖೆ, ಅವರ ಆಪ್ತ ಸಹಾಯಕರಿಗೆ,
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.